# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 667(771)
ಸದಸ್ಯರ ಹೆಸರು : ಶ್ರೀ ಶಶೀಲ್ ಜಿ ನಮೋಶಿ (ಶಿಕ್ಷಕರ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 18-08-2025
ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಳೆದ 13 ವರ್ಷಗಳಲ್ಲಿ ಎಷ್ಟು ಬಾರಿ ಮತ್ತು ಎಷ್ಟು ಜನ ಪ್ರೌಢ ಶಾಲಾ ಶಿಕ್ಷಕರಿಗೆ ಪದವಿ ಪೂರ್ವ ಕಾಲೇಜಿಗೆ ಉಪನ್ಯಾಸಕರಾಗಿ ಬಡ್ತಿ ನೀಡಲಾಗಿದೆ; | 1998ರ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ 2011-12ನೇ ಸಾಲಿನಲ್ಲಿ ಪ್ರೌಢಶಾಲಾ ಸಹಶಿಕ್ಷಕರ ವೃಂದದಿಂದ ಉಪನ್ಯಾಸಕರ ವೃಂದಕ್ಕೆ ಒಟ್ಟು 1184 ಹುದ್ದೆಗಳಿಗೆ ಸ್ಥಾನಪನ್ನ ಬಡ್ತಿ ನೀಡಿ ಆದೇಶಿಸಲಾಗಿದೆ. ನಂತರ ಯಾವುದೇ ಬಡ್ತಿ ಪ್ರಕ್ರಿಯೆ ನಡೆದಿರುವುದಿಲ್ಲ. |
| ಆ) | ಕಳೆದ 13 ವರ್ಷಗಳಿಂದ ಪ್ರೌಢಶಾಲಾ ಶಿಕ್ಷಕರಿಗೆ ಪದವಿ ಪೂರ್ವ ಕಾಲೇಜಿಗೆ ಉಪನ್ಯಾಸಕರಾಗಿ ಬಡ್ತಿ ನೀಡದೇ ಇರಲು ಕಾರಣವೇನು; ಈ ವಿಳಂಬದಿಂದಾಗಿ ಸಾಕಷ್ಟು ಶಿಕ್ಷಕರು ಸುಧೀರ್ಘ ಸೇವೆ ಮಾಡಿ ಬಡ್ತಿ ಇಲ್ಲದೇ ನಿವೃತ್ತಿ ಹೊಂದುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಕೈಗೊಂಡ ಕ್ರಮಗಳೇನು; | ಹೌದು ಬಂದಿರುತ್ತದೆ.<br><br>ಅಧಿಸೂಚನೆ ಸಂಖ್ಯೆ: ಇಡಿ 35 ಡಿಜಿಟಿ 2009 ದಿ: 15/05/2014 ರಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ಪರಿಷ್ಕರಣೆ ಮಾಡಿ ಶೇಕಡ 75 ರಷ್ಟು ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಮತ್ತು ಶೇಕಡ 25 ರಷ್ಟು ಹುದ್ದೆಗಳನ್ನು ಬಡ್ತಿ ಮೂಲಕ ತುಂಬಲು ಅವಕಾಶ ಕಲ್ಪಿಸಲಾಗಿದೆ.<br><br>1998ರ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಬಡ್ತಿ ಕೋಟಾದಲ್ಲಿ 50:50 ಅನುಪಾತದಲ್ಲಿದ್ದು ಶೇಕಡ 50 ರಷ್ಟು ಪದೋನ್ನತಿ ನೀಡಲಾಗಿರುತ್ತದೆ. 2014ರಲ್ಲಿ ವೃಂದ ಮತ್ತು ನೇಮಕಾತಿ ನಿಯಮ ಪರಿಷ್ಕರಿಸಲಾಗಿದ್ದು, ಶೇಕಡ 25 ರಷ್ಟು ಬಡ್ತಿ ಕೋಟಾ ಎಂದು ನಿಗದಿಪಡಿಸಲಾಗಿದೆ. ಅಂದರೆ, 12913*25/= 3228 ಸಂಖ್ಯೆಯ ಹುದ್ದೆಗಳನ್ನು ಬಡ್ತಿ ಉಪನ್ಯಾಸಕರಿಗೆ ಕಾಯ್ದು ಕೊಳ್ಳಬೇಕಾಗಿರುತ್ತದೆ. ಆದರೆ, ಈಗಾಗಲೇ ಈ ಹಿಂದೆ ಶೇಕಡ 50:50 ಅನುಪಾತದಲ್ಲಿ ಬಡ್ತಿ ನೀಡಿದ್ದರಿಂದ, 2014ರ ಪೂರ್ವದಲ್ಲಿ ಬಡ್ತಿ ಕೋಟಾದಲ್ಲಿ 3609 ಉಪನ್ಯಾಸಕರು ಕಾರ್ಯನಿರ್ವಹಿಸುತ್ತಿದ್ದರು. 2014 ರ ಪರಿಷ್ಕೃತ ವೃಂದ ನೇಮಕಾತಿಯ ನಿಯಮಗಳ ನಂತರ ಶೇಕಡ 25 ಕ್ಕೆ ಸಮಾನವಾಗಿ 381 ಬಡ್ತಿ ಉಪನ್ಯಾಸಕರು ಹೆಚ್ಚುವರಿಯಾಗಿ ಕಾರ್ಯನಿರ್ವಹಿಸುತ್ತಿದ್ದರು.<br>ಈ ಕಾರಣ ನಂತರ ಯಾವುದೇ ಬಡ್ತಿ ನೀಡಿರುವುದಿಲ್ಲ. |
| ಇ) | ಕಳೆದ ಅಧಿವೇಶನದಲ್ಲಿನ ಭರವಸೆಯಂತೆ ಸರ್ಕಾರವು ಭರವಸೆ ನೀಡಿ ಶೀಘ್ರವಾಗಿ ಶಿಕ್ಷಕರ ಜೇಷ್ಠತಾ ಪಟ್ಟಿಯನ್ನು ಅಂತಿಮಗೊಳಿಸಿ ಬಡ್ತಿ ಕಾರ್ಯವನ್ನು ಪೂರ್ಣಗೊಳಿಸಲಾಗುವುದು ಎಂದು ತಿಳಿಸಿದ್ದು ಆದರೆ ಇಲ್ಲಿಯವರೆಗೆ ಈ ಪ್ರಕ್ರಿಯೆ ಮುಗಿಸದೇ ಇರಲು ಕಾರಣವೇನು; ಯಾವ ಕಾಲಮಿತಿಯಲ್ಲಿ ಈ ಸಮಸ್ಯೆಯನ್ನು ಬಗೆಹರಿಸಿ | ಪತ್ರ ಸಂಖ್ಯೆ: ಇಪಿ 164 ಎಸ್‌ಓಹೆಚ್ 2023 ದಿನಾಂಕ: 23-10-2024 ರಲ್ಲಿ ಆಯುಕ್ತರು ಮತ್ತು ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಕರ್ನಾಟಕ ಸರ್ಕಾರಿ ನೌಕರರ (ಜೇಷ್ಠತೆ) ನಿಯಮಗಳು, 1957 ರ ನಿಯಮ 7ಎ ರಂತೆ ಅಗತ್ಯ ಕ್ರಮಹಿಸಲು ಸೂಚಿಸಲಾಗಿರುತ್ತದೆ.<br><br>ಆದರನ್ವಯ, ನಿರ್ದೇಶಕರು (ಪ್ರೌಢಶಿಕ್ಷಣ), ಶಾಲಾ ಶಿಕ್ಷಣ ಇಲಾಖೆ, ಆಯುಕ್ತರ ಕಚೇರಿ, ನೃಪತುಂಗ ರಸ್ತೆ, ಬೆಂಗಳೂರು. ಇವರ ಅಧಿಸೂಚನೆ ಸಂಖ್ಯೆ: ಸಿ(2)ಪ್ರೌ.ಶಾ.ಶಿ.ಉ.ಬಡ್ತಿ-02/2020-21,ದಿನಾಂಕ:22/07/2025ರಲ್ಲಿ ದಿನಾಂಕ: 01/01/2025 ರಲ್ಲಿದ್ದಂತೆ ಪ್ರೌಢ ಶಿಕ್ಷಣ ವಿಭಾಗದ ನಿರ್ದೇಶಕರು ಪ್ರೌಢಶಾಲಾ ಸಹ |

| | | |
|---|---|---|
| | ಬಡ್ತಿಯನ್ನು ನೀಡಲಾಗುವುದು? (ವಿವರ ನೀಡುವುದು) | ಶಿಕ್ಷಕರುಗಳಿಗೆ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನ್ಯಾಸಕರ ಹುದ್ದೆಗೆ ಬಡ್ತಿ ನೀಡುವ ಸಂಬಂಧ ಸ್ನಾತಕೋತ್ತರ ವಿದ್ಯಾರ್ಹತೆ ಹೊಂದಿರುವ ಶಿಕ್ಷಕರ ರಾಜ್ಯ ಮಟ್ಟದ ಒಂದೇ ಜೇಷ್ಠತಾ ಪಟ್ಟಿಯನ್ನು ಉಪನ್ಯಾಸಕರ ಹುದ್ದೆ ಬಡ್ತಿಗೆ ಮಾತ್ರ ಅನ್ವಯಿಸಿ ಅಂತಿಮ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಿರುತ್ತಾರೆ.<br><br>ಮುಂದುವರೆದು, ಪದವಿ ಪೂರ್ವ ಶಿಕ್ಷಣ ಇಲಾಖೆಯ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಬಡ್ತಿ ಕೋಟಾದ ವಿವಿಧ ವಿಷಯಗಳ ಉಪನ್ಯಾಸಕರ ಹುದ್ದೆಗಳನ್ನು ಭರ್ತಿ ಮಾಡುವ ಸಂಬಂಧ ಅರ್ಹ ಪ್ರೌಢಶಾಲಾ ಸಹಶಿಕ್ಷಕರನ್ನು ಆಯ್ಕೆ ಮಾಡಲು 2014ರ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಅರ್ಹತಾ ಪರೀಕ್ಷೆ ನಡೆಸಲು ಒಂದು ಸಂಸ್ಥೆಯನ್ನು ನಿರ್ದಿಷ್ಟಪಡಿಸಿ ಆದೇಶ ಹೊರಡಿಸಲು ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ(ಪದವಿ ಪೂರ್ವ) ಇವರು ಕೋರಿದ್ದು, ನಿರ್ದಿಷ್ಟಪಡಿಸಿ ಆದೇಶ ಹೊರಡಿಸುವ ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ. |

ಸಂಖ್ಯೆ: ಇಪಿ 286 ಡಿಜಿಡಬ್ಲ್ಯೂ 2025

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು